ಸಿಸಿ ಸಂಃ **264/2024** ಸಿ ಡಬ್ಲ್ಯೂಃ **2**

ಪಿ ಡಬ್ಲ್ಯೂಃ **2**

**ದಿನಾಂಕಃ 23.06.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.**

| | | |
|---|---|---|
| ಸಾಕ್ಷಿಯ ಹೆಸರು | ಃ | ಮಂಜೂಳ |
| ಗಂಡನ ಹೆಸರು | ಃ | ಗವಿಗೌಡ |
| ವಯಸ್ಸು | ಃ | 45 ವರ್ಷ |
| ಉದ್ಯೋಗ | ಃ | ವ್ಯವಸಾಯ |
| ವಾಸ ಸ್ಥಳ | ಃ | ವಡ್ಡರಹಳ್ಳಿ ಗ್ರಾಮ |

**ಮುಖ್ಯ ವಿಚಾರಣೆಃ ಸರ್ಕಾರದ ಪರವಾಗಿ ಎಪಿಪಿ ರವರಿಂದಃ**

ಸುಮಾರು 2 ವರ್ಷಗಳ ಹಿಂದೆ ನಾನು ಪಾಂಡವಪುರದಿಂದ ಚಿನಕುರಳಿಗೆ ಕೆ.ಎಸ್.ಆರ್.ಟಿ.ಸಿ. ಬಸ್ ನಲ್ಲಿ ಹೋಗುತ್ತಿದ್ದರು. ಬಸ್ ಹಿಂಬದಿ ಸೀಟ್ ನಲ್ಲಿ ಕುಳಿತಿದ್ದಾಗ ಬಸ್ ಅನ್ನು ಚಾಲಕರು ಅತಿವೇಗ ಮತ್ತು ನಿರ್ಲಕ್ಷತೆಯಿಂದ ಚಾಲನೆ ಮಾಡಿದ ಕಾರಣ ಹಂಪ್ಸ್ ಬಳಿ ಎಗರಿಸಿದ ಕಾರಣ ನನ್ನ ತಲೆಗೆ ಮತ್ತು ಹೊಟ್ಟೆಯ ಭಾಗಕ್ಕೆ ಪೆಟ್ಟಾಗಿರುತ್ತದೆ. ನಂತರ ಚೆಲುವೇಗೌಡರವರು ಬಂದು ನನ್ನನ್ನು ಆಸ್ಪತ್ರೆಗೆ ಕರೆದುಕೊಂಡು ಹೋದರು. ಅಪಘಾತವಾದಾಗ ಸಮಯ 12.30 ಆಗಿತ್ತು. ನಂತರ ನನ್ನ ಗಂಡ ಆಸ್ಪತ್ರೆಗೆ ಬಂದರು. ನಂತರ ನಾವು ಹೆಚ್ಚುವರಿ ಚಿಕಿತ್ಸೆಗಾಗಿ ಮೈಸೂರಿನ ಕೆ.ಆರ್.ಆಸ್ಪತ್ರೆಗೆ ಕರೆದುಕೊಂಡು ಹೋದರು, ಅಲ್ಲಿ ಚಿಕಿತ್ಸೆ ಪಡೆದುಕೊಂಡು ಮತ್ತೆ ಮನೆಗೆ ವಾಪಸ್ಸಾಗಿರುತ್ತೇವೆ. ಬಸ್ ನ ಚಾಲಕರು ರಾಜಿಗಾಗಿ ಬರದೇ ಇದ್ದ ಕಾರಣ ಪಾಂಡವಪುರ ಪೊಲೀಸ್ ಠಾಣೆಗೆ ದೂರು ಕೊಟ್ಟೆವು. ಸಾಕ್ಷಿಯು ನ್ಯಾಯಾಲಯದ ಮುಂದಿರುವ ಆರೋಪಿಯನ್ನು ನೋಡಿ ಗುರುತಿಸಿರುತ್ತಾರೆ. ಚಾಲಕ ಅತಿವೇಗವಾಗಿ ಬಸ್ ಅನ್ನು ಚಾಲನೆ ಮಾಡಿದ ಕಾರಣ ಸದರಿ ಅಪಘಾತವಾಗಿದೆ. ನಿಪಿ-4 ಪೋಟೋಗಳನ್ನು ಸಾಕ್ಷಿಯು ನೋಡಿ ಗುರುತಿಸಿರುತ್ತಾರೆ.

**(ಈ ಹಂತದಲ್ಲಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯಾಗಿ ವಿಚಾರಿಸಬೇಕಾಗಿ ಎಪಿಪಿರವರು ಸಾಕ್ಷಿಯನ್ನು ಪಾಟೀ ಸವಾಲು ಮಾಡಬೇಕಾಗಿ ನ್ಯಾಯಾಲಯದಲ್ಲಿ ವಿನಂತಿಸಿದ ಮೇರೆಗೆ ಅನುಮತಿಯನ್ನು ನೀಡಿರುತ್ತದೆ.)**

ಸಿಸಿ ಸಂಃ **264/2024** ಸಿ ಡಬ್ಲ್ಯೂಃ **2**
ಪಿ ಡಬ್ಲ್ಯೂಃ **2**

**ಪಾಟೀ ಸವಾಲುಃ ಸರ್ಕಾರದ ಪರವಾಗಿ ಎಪಿಪಿ ರವರಿಂದಃ**

ಅಪಘಾತವಾದ ದಿನಾಂಕ 24.10.2023 ರಂದು ಮದ್ಯಾಹ್ಞ 12.30 ಗಂಟೆಗೆ ಬಸ್ ಸಂಖ್ಯೆ.ಕೆ.ಎ–11 ಎಫ್.105 ಎಂದರೆ ಸರಿ. ಮಾಹಿತಿ ಕೊಟ್ಟ ವ್ಯಕ್ತಿಯ ಹೆಸರು ಚೆಲುವರಾಜು ಎಂದರೆ ಸರಿ.

**ಪಾಟೀ ಸವಾಲುಃ ಆರೋಪಿ ಪರ ವಕೀಲರು ಸಮಯವನ್ನು ಕೋರಿದ್ದು, ಯಾವುದೇ ಸಕಾರಣ ಇಲ್ಲದೇ ಇರುವ ಕಾರಣ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.**

**ಮರು ವಿಚಾರಣೆಃ** ಇಲ್ಲ.

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)**

**ಓ. ಹೇ. ಕೇ. ಸ. ಇದೆ.**

**ಪ್ರದಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ.,**
**ಸಾಕ್ಷಿದಾರರ ಸಹಿ.** **ಪಾಂಡವಪುರ.**